# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಾಸರಹಳ್ಳಿ ವಲಯ, ಹೆಗ್ಗನಹಳ್ಳಿ ಉಪವಿಭಾಗ

### ವಾರ್ಡ್ ನಂ.71 : ಹೆಗ್ಗನಹಳ್ಳಿ

**ದಿನಾಂಕ: 16.04.2022 ರಂದು ಬೆಳಿಗ್ಗೆ 11.00 ಗಂಟೆಗೆ ಶ್ರೀ ಬಿ.ಆರ್.ರವಿಕುಮಾರ್, ನೋಡಲ್ ಅಧಿಕಾರಿ, ವಾರ್ಡ್ 71 ರವರ ಅಧ್ಯಕ್ಷತೆಯಲ್ಲಿ ಸಹಾಯಕ ಕಾರ್ಯಪಾಲಕ ಅಭಿಯಂತರರು, ಹೆಗ್ಗನಹಳ್ಳಿ ಉಪವಿಭಾಗ ಕಛೇರಿಯಲ್ಲಿ ನಡೆದ ಸಭೆಯ ನಡಾವಳಿಗಳು:**

**ಸಭೆಯಲ್ಲಿ ಹಾಜರಿದ್ದವರು:**

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ಬಿ.ಆರ್.ರವಿಕುಮಾರ್ | ನೋಡಲ್ ಅಧಿಕಾರಿ-ವಾರ್ಡ್ ನಂ.71 |
| 2 | ಜಯಂತ್ ಕುಮಾರ್ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಹಾಗೂ ಸಂಚಾಲಕರು-ವಾರ್ಡ್ 71 |
| 3 | ವೆಂಕಟರಾಜು | ಸದಸ್ಯರು |
| 4 | ಕೆ ಶಿವಲಿಂಗೇಗೌಡ | ತೋಟಗಾರಿಕೆ |
| 5 | ಹೆಚ್ ಮಂಜುನಾಥ್ | ಸದಸ್ಯರು |
| 6 | ಗಂಗರೆಡ್ಡಿ | ಕಂದಾಯ ಪರಿವೀಕ್ಷಕರು |
| 7 | ಮುರುಳಿ | ಕಂದಾಯ ವಸೂಲಿಗಾರರು |
| 8 | ಅನುಪಮ ಎನ್ | ಕಂದಾಯ ವಸೂಲಿಗಾರರು |
| 9 | ರಾಮಣ್ಣ | ಕಿರಿಯ ಆರೋಗ್ಯ ಪರಿವೀಕ್ಷಕರು |

:ನಡಾವಳಿಯ ವರದಿ:

➢ ಕಾರ್ಯದರ್ಶಿಗಳಾದ ಶ್ರೀ ಜಯಂತ್ ಕುಮಾರ್ ಮಾತನಾಡುತ್ತಾ ಸಭೆಗೆ ಹಾಜರಾದ ನೋಡಲ್ ಅಧಿಕಾರಿ ಹಾಗೂ ಪಾಲಿಕೆಯ ಅಧಿಕಾರಿಗಳು/ನೌಕರರಿಗೆ ಸ್ವಾಗತ ಕೋರಿದರು.

- **<u>ವಿಷಯ ಸಂಖ್ಯೆ: 1 :-</u> ಸುಂಕದಕಟ್ಟೆ ಹೊಯ್ಸಳ ನಗರ ನಿವಾಸಿಗಳ ಕುಂದು ಕೊರತೆಯ ಬಗ್ಗೆ**

ವಾರ್ಡ್ ಕಮಿಟಿ ಸದಸ್ಯರು ಹಾಗೂ ಸುಂಕದಕಟ್ಟೆ ನಾಗರೀಕರ ಹಿತರಕ್ಷಣಾ ವೇದಿಕೆ (ರಿ). ಅಧ್ಯಕ್ಷರೂ ಆದ ಶ್ರೀ ವೆಂಕಟರಾಜು ರವರು ಮಾತನಾಡಿ, ಸುಂಕದಕಟ್ಟೆ ಹೊಯ್ಸಳನಗರ ನಿವಾಸಿಗಳ ಕುಂದು ಕೊರತೆಯ ಬಗ್ಗೆ ಪತ್ರ

ಮುಖೇನ ಸಭೆಯ ಗಮನಕ್ಕೆ ತಂದಿದ್ದು, ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳಿಗೆ ಸೂಕ್ತ ಸಲಹೆ ನೀಡಬೇಕ ಕೋರಿದರು.

ಇದಕ್ಕೆ ನೋಡಲ್ ಅಧಿಕಾರಿಗಳು ಮಾತನಾಡಿ, ಪತ್ರದಲ್ಲಿ ತಿಳಿಸಿರುವ ಸಮಸ್ಯೆಗಳ ಪೈಕಿ ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಗೆ ಸಂಬಂಧಿಸಿದ ಸಮಸ್ಯೆಗಳನ್ನು ಪರಿಹರಿಸುವಂತೆ ಸಭೆಯಲ್ಲಿ ಹಾಜರಿದ್ದ ಬಿ.ಡಬ್ಲ್ಯೂ.ಎಸ್.ಎಸ್.ಬಿಯ ಸಿಬ್ಬಂದಿಗೆ ದೂರಿನ ಪ್ರತಿಯನ್ನು ನೀಡಿ ಮೇಲಾಧಿಕಾರಿಗಳ ಗಮನ ಸೆಳೆದು ಕ್ರಮ ಕೈಗೊಳ್ಳುವಂತೆ ತಿಳಿಸಲು ಸೂಚಿಸಿದರು.

- **ವಿಷಯ ಸಂಖ್ಯೆ: 2 :– ಸುಂಕದಕಟ್ಟೆ ಹೊಯ್ಸಳ ನಗರದಲ್ಲಿ ದಿನಾಂಕ:14–02–2022ರಂದು ವಿದ್ಯುತ್ ಕಂಬಂದಿಂದ ಅರ್ಥಿಂಗ್ ಆದ ಪರಿಣಾಮ ಕೆಲವು ಮನೆಗಳಲ್ಲಿ ಲೈಟ್ ಗಳು ಸ್ಟಾಬಿಲೈಝರ್ ಗಳು ಜಖಂ ಆಗಿರುವ ಬಗ್ಗೆ**

ವಾರ್ಡ್ ಕಮಿಟಿ ಸದಸ್ಯರು ಹಾಗೂ ಸುಂಕದಕಟ್ಟೆ ನಾಗರೀಕರ ಹಿತರಕ್ಷಣಾ ವೇದಿಕೆ (ರಿ). ಅಧ್ಯಕ್ಷರೂ ಆದ ಶ್ರೀ ವೆಂಕಟರಾಜು ರವರು ಮಾತನಾಡಿ, ಸುಂಕದಕಟ್ಟೆ ಹೊಯ್ಸಳನಗರದ 2ನೇ ಅಡ್ಡರಸ್ತೆ, ಪೈಪ್ ಲೇಣ್ ರಸ್ತೆ ಇಲ್ಲಿ ದಿನಾಂಕ:14/04/2022ರಂದು ವಿದ್ಯುತ್‌ಕಂಬದಲ್ಲಿ ಬೆಂಕಿಕಾಣಿಸಿಕೊಂಡು, ಅರ್ಥಿಂಗ್ ಕಾರಣದಿಂದಾಗಿ ಕೆಲವು ಮನೆಗಳ ವಿದ್ಯುತ್ ದೀಪ, ಸ್ಟಾಬಿಲೈಝರ್ ಗಳು, ಬಲ್ಪ್‌ಗಳು ಹೊಡೆದುಹೋಗಿದ್ದು, ಸಂಬಂಧಪಟ್ಟವರ ವಿರುದ್ಧ ಕ್ರಮ ಕೈಗೊಳ್ಳುವಂತೆ ಕೋರಿದರು.

ಇದಕ್ಕೆ ನೋಡಲ್ ಅಧಿಕಾರಿಗಳು ಮಾತನಾಡಿ, ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರನ್ನು ಸಂಪರ್ಕಿಸಿ ದಯಮಾಡಿ ಕ್ರಮವಹಿಸುವಂತೆ ತಿಳೀಸಿದರು.

**ವಿಷಯ ಸಂಖ್ಯೆ: 3:–** BBMP SAHAYA APP:

- ಜಯಂತ್ ಕುಮಾರ್, ಸಹಾಯಕ ಅಭಿಯಂತರರು, ವಾರ್ಡ್ ನಂ.71 ಮಾತನಾಡಿ ನಮ್ಮ ಇಲಾಖೆಗೆ ಸಂಬಂಧಪಟ್ಟ ದೂರುಗಳಿಗೆ ಶೀಘ್ರಗತಿಯಲ್ಲಿ ಪರಿಹಾರಕ್ರಮ ಕೈಗೊಳ್ಳುತ್ತಿದ್ದು, ಯಾವುದೇ ಸಮಸ್ಯೆಗಳು ಬಾಕಿ ಇರುವುದಿಲ್ಲ ಎಂದು ತಿಳಿಸಿದರು.
- ರಾಮಣ್ಣ, ಹಿರಿಯ ಆರೋಗ್ಯ ಪರಿವೀಕ್ಷಕರು, ಮಾತನಾಡಿ ಘನ ತ್ಯಾಜ್ಯ ನಿರ್ವಹಣೆಗೆ ಸಂಬಂಧಪಟ್ಟ ದೂರುಗಳನ್ನು ಪರಿಹರಿಸಲಾಗಿದೆ ಹಾಗೂ ಯಾವುದೇ ಸಮಸ್ಯೆ ಬಾಕಿ ಇರುವುದಿಲ್ಲ ಎಂದು ತಿಳಿಸಿದರು.

**ವಿಷಯ ಸಂಖ್ಯೆ: 4:– ರಸ್ತೆಗುಂಡಿಗಳ ಬಗ್ಗೆ**

ಇತ್ತೀಚೆಗೆ ಸುರಿದ ಮಳೆಯಿಂದಾಗೀ ರಸ್ತೆಗಳಲ್ಲಿ ಗುಂಡಿಗಳು ಹೆಚ್ಚಾಗಿದ್ದು, ಈ ಬಗ್ಗೆ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.

ಇದಕ್ಕೆ ಸಹಾಯಕ ಅಭಿಯಂತರರು ಮಾತನಾಡಿ, ವಾರ್ಡ್ 71ರ ವ್ಯಾಪ್ತಿಯ ರಸ್ತೆಗಳಲ್ಲಿ ಬಿದ್ದಿರುವ ರಸ್ತೆಗುಂಡಿಗಳನ್ನು ಪಟ್ಟಿಮಾಡಿಕೊಂಡು, ರಾಜಗೋಪಾಲನಗರದ ಹಲವು ಕಡೆಗಳಲ್ಲಿ ವೆಟ್‌ಮಿಕ್ಸ್ ಅನ್ನು ಅಳವಡಿಸಲಾಗಿರುತ್ತದೆ. ಮಳೆಯು ಬಿಡುವು ಕೊಟ್ಟ ನಂತರ ಡಾಂಬರು ಹಾಕಲಾಗುವುದು ಎಂದು ತಿಳಿಸಿದರು.

ಕೊನೆಯದಾಗಿ ಮಾನ್ಯ ನೋಡಲ್ ಅಧಿಕಾರಿರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿ/ನೌಕರರಿಗೆ ಮತ್ತು ಸದಸ್ಯರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆಯೂ ಈ ಸಭೆಗಳಲ್ಲಿ ಪೂರ್ವತಯಾರಿಯೊಂದಿಗೆ ಪಾಲ್ಗೊಂಡು ವಾರ್ಡ್ ನಂ.71ರ ಅಭಿವೃದ್ಧಿಗೆ ಸಹಕಾರ ನೀಡಬೇಕೆಂದು ಮನವಿ ಮಾಡಿದರು.

➤ ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರಾದ ಶ್ರೀ ಜಯಂತ್ ಕುಮಾರ್ ರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿಗಳು/ನೌಕರರಿಗೂ ಮತ್ತು ಸದಸ್ಯರಿಗೂ ವಂದನೆಯನ್ನು ತಿಳಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

| | |
|---|---|
| ಸದಸ್ಯ ಕಾರ್ಯದರ್ಶಿ<br>ಹಾಗೂ ಸಹಾಯಕ ಅಭಿಯಂತರರು<br>ವಾರ್ಡ್ 71, ಹೆಗ್ಗನಹಳ್ಳಿ<br>ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ | ವಾರ್ಡ್ ಸಮಿತಿ ಅಧ್ಯಕ್ಷರು<br>ಹಾಗೂ ವಾರ್ಡ್‌ನ ನೋಡಲ್ ಅಧಿಕಾರಿ<br>ವಾರ್ಡ್ ನಂ.71, ಹೆಗ್ಗನಹಳ್ಳಿ<br>ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ |

ಪ್ರತಿಯನ್ನು:

1) ಮಾನ್ಯ ಶಾಸಕರು, ದಾಸರಹಳ್ಳಿ ವಿಧಾನಸಭಾ ಕ್ಷೇತ್ರ, ರವರ ಆದ್ಯ ಗಮನಕ್ಕೆ ಕಳುಹಿಸಿದೆ.
2) ಮಾನ್ಯ ವಲಯ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
3) ಜಂಟಿ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
4) ಕಾರ್ಯಪಾಲಕ ಅಭಿಯಂತರರು (ದಾಸರಹಳ್ಳಿ ವಿಭಾಗ) ರವರ ಮಾಹಿತಿಗಾಗಿ ಕಳುಹಿಸಿದೆ.
5) ಸಹಾಯಕ ಕಾರ್ಯಪಾಲಕ ಅಭಿಯಂತರರು (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
6) ಸಹಾಯಕ ಕಂದಾಯ ಅಧಿಕಾರಿ (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
7) ಹಿರಿಯ/ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ.71 ರವರ ಮಾಹಿತಿಗಾಗಿ
8) ವಾರ್ಡ್ ಸಮಿತಿ ಸಭೆಯ ಸದಸ್ಯರಿಗೆ ಮಾಹಿತಿಗಾಗಿ ಕಳುಹಿಸಿದೆ.
9) ಕಛೇರಿ ಕಡತಕ್ಕೆ